## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:–** 2006ರ ಪರಿಷ್ಕೃತ ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿನ ನ್ಯಾಯಾಂಗ ಅಧಿಕಾರಿಗಳು ಮತ್ತು ನಿವೃತ್ತಿ ವೇತನದಾರರು ಹಾಗೂ 2006ರ ಪರಿಷ್ಕೃತ ಎಐಸಿಟಿಇ ವೇತನ ಶ್ರೇಣಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳ ತುಟ್ಟಿಭತ್ಯೆಯ ದರಗಳನ್ನು ಪರಿಷ್ಕರಿಸುವ ಕುರಿತು.

**ಓದಲಾಗಿದೆ:–** 1. ಸ.ಆ. ಸಂಖ್ಯೆ: ಆಇ 2 ಎಸ್‌ಆರ್‌ಪಿ 2019 ದಿನಾಂಕ: 03.05.2019.
2. ಸ.ಆ. ಸಂಖ್ಯೆ: ಆಇ 17 ಎಸ್‌ಆರ್‌ಪಿ 2019 ದಿನಾಂಕ: 02.11.2019.
3. ಸ.ಆ. ಸಂಖ್ಯೆ: ಆಇ 10 ಎಸ್‌ಆರ್‌ಪಿ 2020 ದಿನಾಂಕ: 05.05.2020.
4. ಭಾರತ ಸರ್ಕಾರದ ದಿನಾಂಕ: 13.08.2021ರ ಅಧಿಕೃತ ಜ್ಞಾಪನ ಸಂಖ್ಯೆ: No.1/3(1)/ 2008/E-II(B)

**ಪ್ರಸ್ತಾವನೆ:**

ಕೋವಿಡ್–19ರ ಸಾಂಕ್ರಾಮಿಕದಿಂದ ಉಂಟಾದ ಸಂಕಷ್ಟಗಳ ಕಾರಣ ಸರ್ಕಾರದ ನೀತಿಯಂತೆ ಮೇಲೆ (3)ರಲ್ಲಿ ಓದಲಾದ ದಿನಾಂಕ:05.05.2020ರ ಆದೇಶದಲ್ಲಿ ಯುಜಿಸಿ/ಐಸಿಎಆರ್/ಎಐಸಿಟಿಇ/ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿನ ನೌಕರರನ್ನೂ ಒಳಗೊಂಡಂತೆ ರಾಜ್ಯ ಸರ್ಕಾರಿ ನೌಕರರಿಗೆ ದಿನಾಂಕ: 01.01.2020ರಿಂದ ದಿನಾಂಕ:30.06.2021ರ ಅವಧಿಯವರೆಗೆ ಲಭ್ಯವಿದ್ದ ತುಟ್ಟಿಭತ್ಯೆ ದರಗಳನ್ನು ಸ್ಥಗಿತಗೊಳಿಸಿ ಆದೇಶಗಳನ್ನು ಹೊರಡಿಸಲಾಗಿತ್ತು. ಮೇಲೆ (4)ರಲ್ಲಿ ಓದಲಾದ ಭಾರತ ಸರ್ಕಾರದ ದಿನಾಂಕ: 13.08.2021ರ ಜ್ಞಾಪನದಲ್ಲಿ 6ನೇ ಕೇಂದ್ರ ವೇತನ ಆಯೋಗದ ವೇತನ ಶ್ರೇಣಿಗಳಲ್ಲಿನ ಕೇಂದ್ರ ಸರ್ಕಾರದ ನೌಕರರಿಗೆ ದಿನಾಂಕ: 01.01.2020ರಿಂದ ದಿನಾಂಕ:30.06.2021ರ ಅವಧಿಯ ತುಟ್ಟಿಭತ್ಯೆಯ ದರಗಳನ್ನು ಪರಿಷ್ಕರಿಸಿ ಆದೇಶಗಳನ್ನು ಹೊರಡಿಸಲಾಗಿರುತ್ತದೆ.

ಆದುದರಿಂದ, 2006ರ ಪರಿಷ್ಕೃತ ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿ ಹುದ್ದೆಗಳನ್ನು ಧಾರಣೆ ಮಾಡಿರುವ ನ್ಯಾಯಾಂಗ ಅಧಿಕಾರಿಗಳು ಮತ್ತು ಪಿಂಚಣಿದಾರರಿಗೆ ಹಾಗೂ 2006ರ ಪರಿಷ್ಕೃತ ಎಐಸಿಟಿಇ ವೇತನ ಶ್ರೇಣಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ತುಟ್ಟಿಭತ್ಯೆಯನ್ನು ಪರಿಷ್ಕರಿಸುವುದು ಅವಶ್ಯವೆಂದು ಪರಿಗಣಿಸಲಾಗಿರುತ್ತದೆ. ಅದರಂತೆ, ಈ ಕೆಳಕಂಡ ಆದೇಶಗಳನ್ನು ಹೊರಡಿಸಲಾಗಿದೆ.

### ಸರ್ಕಾರಿ ಆದೇಶ ಸಂಖ್ಯೆ: ಆಇ 20 ಎಸ್‌ಆರ್‌ಪಿ 2021
### ಬೆಂಗಳೂರು, ದಿನಾಂಕ: 19ನೇ ಆಗಸ್ಟ್ 2021

2006ರ ಪರಿಷ್ಕೃತ ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿನ ನ್ಯಾಯಾಂಗ ಅಧಿಕಾರಿಗಳು ಮತ್ತು 2006ರ ಪರಿಷ್ಕೃತ ಎಐಸಿಟಿಇ ವೇತನ ಶ್ರೇಣಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರುಗಳಿಗೆ ದಿನಾಂಕ: 01.01.2020 ರಿಂದ ದಿನಾಂಕ: 30.06.2021ರ ಅವಧಿಯ ತುಟ್ಟಿಭತ್ಯೆಯ ಹೆಚ್ಚುವರಿ ಕಂತುಗಳನ್ನು ಬಿಡುಗಡೆಗೊಳಿಸಲು ರಾಜ್ಯ ಸರ್ಕಾರವು ಹರ್ಷಿಸುತ್ತದೆ. ಅದರಂತೆ, 2006ರ ಪರಿಷ್ಕೃತ ಎಐಸಿಟಿಇ/ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿನ ನೌಕರರ ತುಟ್ಟಿಭತ್ಯೆಯ ದರಗಳನ್ನು ಪ್ರಸ್ತುತ ಮೂಲ ವೇತನದ **ಶೇಕಡ 164 ರಿಂದ ಶೇಕಡ 189ಕ್ಕೆ 1ನೇ ಜುಲೈ 2021**ರಿಂದ ಜಾರಿಗೆ ಬರುವಂತೆ ಪರಿಷ್ಕರಿಸತಕ್ಕದ್ದು.

2. ಈ ಆದೇಶದ ಉದ್ದೇಶಗಳಿಗಾಗಿ 'ಮೂಲ ವೇತನ' ಎಂದರೆ ಸರ್ಕಾರಿ ನೌಕರನು ಧಾರಣೆ ಮಾಡಿರುವ ಹುದ್ದೆಗೆ ಅನ್ವಯವಾಗುವ 2006ರ ಪರಿಷ್ಕೃತ ಎಐಸಿಟಿಇ/ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿ ಪಡೆಯುವ ವೇತನ.

3. ಮೂಲ ವೇತನಕ್ಕೆ ಇನ್ನಾವುದೇ ಉಪಲಬ್ಧಗಳನ್ನು ಸೇರಿಸತಕ್ಕದ್ದಲ್ಲ.

4. ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳ ನಿವೃತ್ತ ನೌಕರರಿಗೆ ಈ ಆದೇಶಗಳು ಅನ್ವಯಿಸುವುದಿಲ್ಲ.

5. 2006ರ ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ನಿವೃತ್ತಿ ವೇತನದಾರರು ಮತ್ತು ಕುಟುಂಬ ಪಿಂಚಣಿದಾರರಿಗೆ ಕೂಡ ದಿನಾಂಕ **1ನೇ ಜುಲೈ 2021** ರಿಂದ ಜಾರಿಗೆ ಬರುವಂತೆ ಹಾಲಿ ಲಭ್ಯವಿರುವ ತುಟ್ಟಿಭತ್ಯೆಯ ದರಗಳನ್ನು ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಪ್ರಸಕ್ತ **ಶೇಕಡ 164** ರಿಂದ **ಶೇಕಡ 189ಕ್ಕೆ** ಹೆಚ್ಚಿಸಿ ಮಂಜೂರು ಮಾಡಲು ಸರ್ಕಾರವು ಹರ್ಷಿಸುತ್ತದೆ.

6. ಈ ಆದೇಶದನ್ವಯ ಲಭ್ಯವಾಗುವ ತುಟ್ಟಿ ಭತ್ಯೆಯನ್ನು ಮುಂದಿನ ಆದೇಶದವರೆಗೆ ನಗದಾಗಿ ಪಾವತಿ ಮಾಡುವುದು.

7. ತುಟ್ಟಿ ಭತ್ಯೆಯ ಕಾರಣದಿಂದ ಸಂದಾಯ ಮಾಡಬೇಕಾಗಿರುವ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

8. ತುಟ್ಟಿ ಭತ್ಯೆಯನ್ನು ಸಂಭಾವನೆಯ ವಿಶಿಷ್ಟ ಅಂಶವಾಗಿ ತೋರಿಸುವುದು ಮತ್ತು ಯಾವುದೇ ಉದ್ದೇಶಕ್ಕಾಗಿ ಇದನ್ನು ವೇತನ ಎಂದು ಪರಿಗಣಿಸಲಾಗುವುದಿಲ್ಲ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

Uma.K
**(ಉಮಾ.ಕೆ.)**
**ಸರ್ಕಾರದ ಉಪ ಕಾರ್ಯದರ್ಶಿ,**
**ಆರ್ಥಿಕ ಇಲಾಖೆ (ಸೇವೆಗಳು-2).**

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಪ್ರಧಾನ ಮಹಾಲೇಖಪಾಲರು(G&SSA),ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ. ನಂ.5398), ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (E&RSA).ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ. ನಂ.5398) ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು(ಲೆಕ್ಕಗಳು ಮತ್ತು ಹಕ್ಕುಗಳು),ಕರ್ನಾಟಕ, ಪಾರ್ಕ್‌ಹೌಸ್‌ರಸ್ತೆ(ಪಿ.ಬಿ. ನಂ.5329), ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
9. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
10. ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಕುಲಸಚಿವರು (ಆಡಳಿತ).
11. ಆಯುಕ್ತರು/ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ/ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು
12. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
13. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
14. ಯೋಜನಾ ನಿರ್ದೇಶಕರು, ಹೆಚ್‌ಆರ್‌ಎಂಎಸ್ 2.0, ಆರ್ಥಿಕ ಇಲಾಖೆ, 5ನೇ ಮಹಡಿ, ನ್ಯೂ ಕೆ.ಪಿ.ಸಿ.ಎಲ್. ಗ್ರೀನ್ ಬಿಲ್ಡಿಂಗ್ (ಸಿ.ಐ.ಡಿ. ಕಛೇರಿ ಹತ್ತಿರ), ಅರಮನೆ ರಸ್ತೆ, ಬೆಂಗಳೂರು-560001.
15. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
16. ವಾರಪತ್ರ/ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ www.finance.kar.nic.in ವೀಕ್ಷಿಸಿ.**